# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ರಾಮಕೃಷ್ಣಯ್ಯ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದೊಡ್ಡಬಳ್ಳಾಪುರ ಇವರ ವಿರುದ್ಧದ ಇಲಾಖಾ ವಿಚಾರಣೆ ಬಗ್ಗೆ.

ಓದಲಾಗಿದೆ:- ಸಹಾಯಕ ನಿಬಂಧಕರು ಲೀಗಲ್ ಓಪಿನಿಯನ್ -2. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೇಂಟ್ /ಉಪಲೋಕ್ /ಬಿಡಿ-101/2006/ ಎಆರ್‌ಎಲ್‌ಓ-2, ದಿನಾಂಕ 22-10-2013.

------

ಪ್ರಸ್ತಾವನೆ

ಸಹಾಯಕ ನಿಬಂಧಕರು ಲೀಗಲ್ ಓಪಿನಿಯನ್ -2, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಓದಲಾದ ದಿನಾಂಕ 22-10-2013ರ ಪತ್ರದಲ್ಲಿ ಶ್ರೀ ರಾಮಕೃಷ್ಣಯ್ಯ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದೊಡ್ಡಬಳ್ಳಾಪುರ ಇವರ ವಿರುದ್ಧ ಕರ್ನಾಟಕ ಉಪ ಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸಿನಂತೆ ಕ್ರಮವಹಿಸುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12 (4)ರನ್ವಯ ಲೋಕಾಯುಕ್ತ ಸಂಸ್ಥೆಗೆ ಮೂರು ತಿಂಗಳೊಳಗಾಗಿ ವರದಿ ಮಾಡಬೇಕೆಂದು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-2 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ದಿನಾಂಕ 10-10-2013 ಸಂಖ್ಯೆ Compt/Uplok/BD-101/2006/ARLO-2 ರ ವರದಿಯಲ್ಲಿ ಶ್ರೀ ಎಸ್.ನರಸಿಂಹಯ್ಯ, ಸೋಲದೇವನಹಳ್ಳಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಶ್ರೀ ರಾಮಕೃಷ್ಣಯ್ಯ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದೊಡ್ಡಬಳ್ಳಾಪುರ ರವರು 2005-06ನೇ ಸಾಲಿನಲ್ಲಿ ಸುವರ್ಣ ಗ್ರಾಮ ರೋಜಗಾರ್ ಯೋಜನೆಯಡಿ 5-6 ವರ್ಷಗಳ ಹಿಂದೆ ಕೈಗೊಳ್ಳಲಾಗಿದ್ದ ಕಾಮಗಾರಿಗೆ ಖೊಟ್ಟಿ ಬಿಲ್ಲುಗಳನ್ನು ತಯಾರಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುತ್ತಾರೆಂದು ನೀಡಿದ್ದ ದೂರಿನ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿದಾಗ ಶ್ರೀ ರಾಮಕೃಷ್ಣಯ್ಯ, ಕಿರಿಯ ಇಂಜಿನಿಯರ್ ಇವರು ಹಣ ದುರುಪಯೋಗಪಡಿಸಿ ಕೊಂಡಿರುವುದಲ್ಲದೆ, ಕ.ನಾ.ಸೇ. (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ಕರ್ತವ್ಯಲೋಪವೆಸಗಿರುವುದು ಕಂಡು ಬಂದಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14 (ಎ) ರನ್ವಯ ಪ್ರಕರಣವನ್ನು ಉಪ ಲೋಕಾಯುಕ್ತ ರವರಿಗೆ ವಹಿಸಬೇಕೆಂದು ಶಿಫಾರಸ್ಸು ಮಾಡಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-2 ರವರು ಶಿಫಾರಸ್ಸು ಮಾಡಿರುವಂತೆ ಶ್ರೀ ರಾಮಕೃಷ್ಣಯ್ಯ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದೊಡ್ಡಬಳ್ಳಾಪುರ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ

---2

ನಿಯಮ 14 (ಎ) ರಡಿಯಲ್ಲಿ ಶಿಸ್ತು ಕ್ರಮ ಪ್ರಾರಂಭಿಸಲು ಹಾಗೂ ಅದಕ್ಕಾಗಿ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 36 ಇಎಸ್‌ಕ್ಯೂ 2013 ಬೆಂಗಳೂರು ದಿನಾಂಕ 14-11-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ರಾಮಕೃಷ್ಣಯ್ಯ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದೊಡ್ಡಬಳ್ಳಾಪುರ ಇವರ ವಿರುದ್ಧ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14 (ಎ) ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ
ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ;
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ್ತ / ಉಪಲೋಕಾಯುಕ್ತ-2, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸಹಾಯಕ ನಿಬಂಧಕರು ಲೀಗಲ್ ಓಪಿನಿಯನ್-2, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು [ಮುಖ ಪತ್ರದೊಂದಿಗೆ]
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಬೆಂಗಳೂರು.
9. ಶ್ರೀ ರಾಮಕೃಷ್ಣಯ್ಯ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದೊಡ್ಡಬಳ್ಳಾಪುರ
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಹೆಚ್ಚುವರಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್